ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎ.ಸಿ.ಜೆ.ಎಂ. ನ್ಯಾಯಾಲಯ,
ಉಡುಪಿ.

ಸಿ.ಸಿ.:1767/2024
ಸಿ.ಡಬ್ಲ್ಯು 4 ಪಿ.ಡಬ್ಲೂ : 3

| | |
|---|---|
| ಸಾಕ್ಷಿದಾರರ ಹೆಸರು | ಪ್ರಶಾಂತ್ |
| ತಂದೆಯ ಹೆಸರು | ರವೀಂದ್ರ ಶೆಟ್ಟಿ |
| ವಯಸ್ಸು | 38 ವರ್ಷ |
| ಉದ್ಯೋಗ | ಖಾಸಗಿ ಕೆಲಸ |
| ವಾಸಸ್ಥಳ | ಪಡುಬಿದ್ರಿ |

ದಿನಾಂಕಃ 06-03-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದಃ**

ಈ ದಿನ ನ್ಯಾಯಾಲಯದ ಮುಂದೆ ಇರುವ ಆರೋಪಿಯವರನ್ನು ನೋಡಿರುವುದಿಲ್ಲ. ಅಪಘಾತವನ್ನು ನಾನು ಕಣ್ಣಾರೆ ನೋಡಿರುವುದಿಲ್ಲ. ಪೊಲೀಸಿನವರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ನಿಪಿ 6 ರಲ್ಲಿ ಕಾಣುವ ವಾಹನವನ್ನು ನಾನು ಈ ಹಿಂದೆ ನೋಡಿರುವುದಿಲ್ಲ ಚಾಸಾ 2 ರವರ ಪರಿಚಯ ಇರುವುದಿಲ್ಲ.

ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿ ಕೂಲ ಸಾಕ್ಷಿ ಎಂದು ತಿಳಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ ಅನುಮತಿಯನ್ನು ನೀಡಲಾಯಿತು.

**ಪಾಟೀ ಸವಾಲುಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿಃ 14-02-2024 ರಂದು ಬೆಳಿಗ್ಗೆ 10.15 ರ ಸಮಯದಲ್ಲಿ ನಿಪಿ 6 ರಲ್ಲಿ ಕಾಣುವ ವಾಹನವನ್ನು ಈ ಪ್ರಕರಣದ ಆರೋಪಿಯವರು ಬಡಾ ಗ್ರಾಮದ ಉಚ್ಚಿ ಲ ಪೇಟೆಯಲ್ಲಿರುವ ಬ್ಲೂ ವೇವ್ ಕಟ್ಟಡದ ಎದುರು ಪಡುಬಿದ್ರಿ ಕಡೆಯಿಂದ ಕಾಪು ಕಡೆಗೆ ಎನ್ ಹೆಚ್ 66 ರಲ್ಲಿ ಅತೀ ವೇಗ ಮತ್ತು ಅಜಾಗರೂಕತೆಯಲ್ಲಿ

ಚಾಲನೆ ಮಾಡಿಕೊಂಡು ಬಂದು ರಸ್ತೆಯ ಡಿವೈಡರ್ ನ ಬಳಿ ನಿಂತಿದ್ದ ಚಾಸಾ 2 ರವರಿಗೆ ಡಿಕ್ಕಿ ಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಚಾಸಾ 2 ರವರಿಗೆ ತೀವ್ರ ಸ್ವರೂಪದ ಗಾಯವಾಗಿದ್ದು ಅವರನ್ನು ಉಡುಪಿಯ ಆದರ್ಶ ಆಸ್ಪತ್ರೆಗೆ ಚಿಕಿತ್ಸೆ ಗಾಗಿ ಕಳುಹಿಸಿಕೊಟ್ಟಿದ್ದೀರಿ ಎಂದರೆ ಸರಿಯಲ್ಲ. ಅಪಘಾತವನ್ನು ನೋಡಿರುವ ಬಗ್ಗೆ ದಿಃ 14-02-2024 ರಂದು ನೀವು ಹೇಳಿಕೆಯನ್ನು ನೀಡಿರುತ್ತೀರಿ ಎಂದರೆ ಸರಿಯಲ್ಲ. ಹೇಳಿಕೆಯನ್ನು ಸಾಕ್ಷಿಯವರಿಗೆ ಓದಿ ಹೇಳಿದ್ದು ಹೇಳಿಕೆಯನ್ನು ನಿರಾಕರಿಸಿರುತ್ತಾರೆ ಹೇಳಿಕೆಯನ್ನು ನಿಪಿ. 8 ಎಂದು ಗುರುತಿಸಲಾಯಿತು. ಘಟನೆಯ ಬಗ್ಗೆ ತಿಳಿದ್ದದ್ದರೂ ಆರೋಪಿಯವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಯವರ ಪರ ಶ್ರೀ ಡಿ. ಸಿ ಎಸ್ ವಕೀಲರಿಂದಃ**

ಪಾಟೀ ಸವಾಲು ಇಲ್ಲವೆಂದು ಮನವಿ ಮಾಡಿರುತ್ತಾರೆ.

ಮರು ವಿಚಾರಣೆಃ ಇಲ್ಲ.

(ತೆರದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ ಎಂದು ಒಪ್ಪಿದ್ದೇನೆ.

ಹೆ.ಹಿ.ಸಿ.ನ್ಯಾ ಮತ್ತು ಎಸಿಜೆಎಂ ಉಡುಪಿ.